# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 297 |
| ಸದಸ್ಯರ ಹೆಸರು | : | ಶ್ರೀ ಗೋವಿಂದ ರಾಜು<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಕಂದಾಯ ಸಚಿವರು |
| ಉತ್ತರಿಸುವ ದಿನಾಂಕ | : | 11.12.2024 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಳೆದ 5 ವರ್ಷಗಳಿಂದ ಇಲ್ಲಿಯವರೆಗೂ ಕಂದಾಯ ಇಲಾಖೆಯಡಿಯಲ್ಲಿ ಬರುವ ನ್ಯಾಯಾಲಯಗಳಲ್ಲಿ ಬಾಕಿ ಪ್ರಕರಣ: ಹೆಚ್ಚು ಅವಧಿಯ ಬಾಕಿ ಪ್ರಕರಣ ಹಾಗೂ ಆದೇಶಕ್ಕೆ ಬಾಕಿಯಿರುವ ಭೂ ವ್ಯಾಜ್ಯ ಪ್ರಕರಣಗಳ ಸಂಖ್ಯೆಯೆಷ್ಟು; ಹಾಗೂ ಬಾಕಿ ಉಳಿಯಲು ಇರುವ ಕಾರಣವೇನು; | ರಾಜ್ಯದಲ್ಲಿ ಕಂದಾಯ ಇಲಾಖೆಯ ಅರೆ ನ್ಯಾಯಿಕ ಪ್ರಾಧಿಕಾರಗಳಾದ ಜಿಲ್ಲಾಧಿಕಾರಿ, ಉಪ ವಿಭಾಗಾಧಿಕಾರಿ ಮತ್ತು ತಹಶೀಲ್ದಾರ್ ನ್ಯಾಯಾಲಯಗಳಲ್ಲಿ ಪ್ರಸ್ತುತ ಒಟ್ಟು 52151 ಪ್ರಕರಣಗಳು ಬಾಕಿ ಇರುತ್ತವೆ. ಇವುಗಳಲ್ಲಿ 3 ವರ್ಷಕ್ಕಿಂತ ಹೆಚ್ಚಿನ ಅವಧಿಗೆ ಬಾಕಿ ಇರುವ ಪ್ರಕರಣಗಳು 15998 ಹಾಗೂ ಆದೇಶ ಕಾಯ್ದಿರಿಸಿರುವ ಪ್ರಕರಣಗಳು 2650.<br><br>ಕೆಲವು ಪ್ರಕರಣಗಳು ವಾದಿ/ಪ್ರತಿವಾದಿಗಳು ವಿಚಾರಣೆಗೆ ಹೆಚ್ಚಿನ ಕಾಲಾವಕಾಶ ಕೋರಿರುವ ಕಾರಣ, ವಾದಿ/ಪ್ರತಿವಾದಿಗಳು ಮರಣ ಹೊಂದಿದಾಗ ಅವರ ವಾರಸುದಾರರನ್ನು ಪ್ರಕರಣಕ್ಕೆ ಸೇರ್ಪಡೆ ಮಾಡುವಲ್ಲಿ ವಿಳಂಬವಾಗುವ ಕಾರಣ ಹಾಗೂ ಸರ್ಕಾರದ ತುರ್ತು ಸಭೆಗಳು, ಕಾರ್ಯಕ್ರಮಗಳು ಮತ್ತು ಚುನಾವಣಾ ಕರ್ತವ್ಯ ನಿರ್ವಹಿಸಬೇಕಾದ ಸಂದರ್ಭಗಳಲ್ಲಿ ಪ್ರಕರಣಗಳ ವಿಲೇವಾರಿಯಲ್ಲಿ ವಿಳಂಬ ಉಂಟಾಗಿ ಬಾಕಿ ಉಳಿಯುತ್ತವೆ. |
| (ಆ) | ಭೂ ವ್ಯಾಜ್ಯಗಳನ್ನು ಇಂತಿಷ್ಟು ಕಾಲಮಿತಿಯಡಿಯಲ್ಲಿ ಪೂರ್ಣಗೊಳಿಸಬೇಕೆಂಬ ನೀತಿ ನಿಯಮ ಹಾಗೂ ಮಾನದಂಡವನ್ನು ಸರ್ಕಾರ ರೂಪಿಸಿದೆಯೇ; | ಹೌದು.<br>ಕಂದಾಯ ನ್ಯಾಯಾಲಯಗಳಲ್ಲಿನ ಪ್ರಕರಣಗಳ ಇತ್ಯರ್ಥಕ್ಕೆ ಸಂಬಂಧಿಸಿದಂತೆ ಸರ್ಕಾರದ ಸುತ್ತೋಲೆ ಸಂಖ್ಯೆ:ಕಂಇ 193 ಟಿಆರ್‌ಎಂ 2019, ದಿನಾಂಕ:18.02.2021ರಲ್ಲಿ ಹೊರಡಿಸಿರುವ ಮಾರ್ಗಸೂಚಿಗಳನ್ವಯ ಆಸ್ತಿಯ ಹಕ್ಕಿನ ಹೊರತಾದ ವಿವಾದಿತ ಪ್ರಕರಣಗಳನ್ನು ತಹಶೀಲ್ದಾರ್‌ರವರು ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ ಕಲಂ 129ರಡಿ ಮೂರು (3) ತಿಂಗಳೊಳಗೆ ಇತ್ಯರ್ಥಪಡಿಸುವಂತೆ ಹಾಗೂ ಸದರಿ ಕಾಯ್ದೆಯ ಕಲಂ 136(2) ಹಾಗೂ 136(3)ರ (ಅಪೀಲು/ಪುನರೀಕ್ಷಣೆ) ಅಡಿಯಲ್ಲಿ ಕ್ರಮವಾಗಿ ಉಪ ವಿಭಾಗಾಧಿಕಾರಿ ಮತ್ತು ಜಿಲ್ಲಾಧಿಕಾರಿಗಳ ನ್ಯಾಯಾಲಯಗಳಲ್ಲಿ ದಾಖಲಾಗುವ ಮೇಲ್ಮನವಿ ಪ್ರಕರಣಗಳನ್ನು ಎದುರುದಾರರಿಗೆ ನೋಟೀಸು ನೀಡಿದ ದಿನದಿಂದ ಆರು (06) ತಿಂಗಳ ಒಳಗಾಗಿ ಇತ್ಯರ್ಥಪಡಿಸುವಂತೆ ಕಾಲಮಿತಿ ನಿಗದಿಪಡಿಸಿದೆ.<br>ಸರ್ಕಾರದ ಸುತ್ತೋಲೆ ಸಂಖ್ಯೆ:ಕಂಇ 17 ಟಿಆರ್‌ಎಂ 2021, ದಿನಾಂಕ:22.02.2021ರ ಹಾಗೂ ಸುತ್ತೋಲೆ ಸಂಖ್ಯೆ:ಕಂಇ 118 ಟಿಆರ್‌ಎಂ 2023 (ಭಾ-1), ದಿನಾಂಕ:26.08.2024ರಲ್ಲಿ |

| | | |
|---|---|---|
| | | ವಾರದ ಪ್ರತಿ ಮಂಗಳವಾರ, ಗುರುವಾರಗಳ ಜೊತೆಗೆ ಮತ್ತೊಂದು ಸೂಕ್ತ ದಿನವನ್ನು ಸೇರಿಸಿಕೊಂಡು ಒಟ್ಟು 3 ದಿನಗಳು ಕಡ್ಡಾಯವಾಗಿ ಕಂದಾಯ ಅರೆ ನ್ಯಾಯಿಕ ಪ್ರಕರಣಗಳ ವಿಚಾರಣೆ ನಡೆಸಿ, ಪ್ರಕರಣಗಳ ಶೀಘ್ರ ವಿಲೇವಾರಿ ಮಾಡಲು ಹಲವು ಕಟ್ಟುನಿಟ್ಟಿನ ನಿರ್ದೇಶನಗಳನ್ನು ನೀಡಲಾಗಿದೆ.<br><br>ಸರ್ಕಾರದ ಅಧಿಸೂಚನೆ ಸಂ:ಕಂಇ 86 ಟಿಆರ್ಎಂ 2022, ದಿನಾಂಕ:13.4.2022ರ ಅಧಿಸೂಚನೆಯಲ್ಲಿ ಹಕ್ಕು ಬದಲಾವಣೆಗಳ ಸಂಬಂಧ (ಬಾಕಿ ಇರುವ ಪ್ರಕರಣಗಳು ಸೇರಿ) ತಕರಾರು ಪ್ರಕರಣಗಳನ್ನು ಶೀಘ್ರವಾಗಿ ಇತ್ಯರ್ಥಪಡಿಸುವ ದೃಷ್ಟಿಯಿಂದ ಹೋಬಳಿಗಳಲ್ಲಿ ಕಾರ್ಯನಿರ್ವಹಿಸುವ ಉಪ ತಹಶೀಲ್ದಾರ್ ಹುದ್ದೆಯು ಶಿರಸ್ತೇದಾರ್ ಹುದ್ದೆಗೆ ಸಮಾನಾಂತರವಾಗಿರುವುದರಿಂದ ಸಂಬಂಧಪಟ್ಟ ಹೋಬಳಿಯ ವ್ಯಾಪ್ತಿಯಲ್ಲಿ ಬರುವ ಪ್ರಕರಣಗಳನ್ನು ಆಯಾ ಉಪ ತಹಶೀಲ್ದಾರ್ ರವರುಗಳು ಹಾಗೂ ಕಸಬಾ ಹೋಬಳಿಯ ಪ್ರಕರಣಗಳನ್ನು ತಹಶೀಲ್ದಾರ್‌ರವರು ಇತ್ಯರ್ಥಪಡಿಸಲು ನಿರ್ದೇಶನ ನೀಡಲಾಗಿದೆ.<br>ಉಪ ವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ಬಾಕಿ ಇರುವ ತಕರಾರು ಪ್ರಕರಣಗಳ ಸಂಖ್ಯೆಯು ಹೆಚ್ಚಾಗಿದ್ದಲ್ಲಿ ಅಂತಹ ಕಡೆಗಳಲ್ಲಿ ಪ್ರಕರಣಗಳ ಇತ್ಯರ್ಥಕ್ಕೆ ಸಂಬಂಧಿಸಿದಂತೆ ಕರ್ನಾಟಕ ಭೂ ಕಂದಾಯ ನಿಯಮಗಳು, 1964ರ ನಿಯಮ 43(3) ಮತ್ತು 69ರಲ್ಲಿ "ಅಸಿಸ್ಟೆಂಟ್ ಕಮಿಶನರ್" ಪದದ ನಂತರ "ಅಥವಾ ಸರ್ಕಾರದಿಂದ ಕಾಲಕಾಲಕ್ಕೆ ಅಧಿಸೂಚಿಸುವ ಅಸಿಸ್ಟೆಂಟ್ ಕಮಿಶನರಿಗೆ ಸಮಾನ ದರ್ಜೆಯ ಅಧಿಕಾರಿ" ಎಂದು ತಿದ್ದುಪಡಿ ಮಾಡಿ ಸರ್ಕಾರದ ಅಧಿಸೂಚನೆ ಸಂಖ್ಯೆ:ಕಂಇ 13 ಎಲ್‌ಜಿಪಿ 2022, ದಿನಾಂಕ:03.11.2022ರಲ್ಲಿ ಆದೇಶಿಸಲಾಗಿದೆ.<br>ಸದರಿ ಅಧಿಸೂಚನೆಯನ್ವಯ ಹೆಚ್ಚು ಪ್ರಕರಣಗಳು ಬಾಕಿ ಇರುವ ಜಿಲ್ಲೆಗಳಲ್ಲಿನ ಉಪ ವಿಭಾಗಾಧಿಕಾರಿಗಳ ನ್ಯಾಯಾಲಯಗಳಲ್ಲಿ ದಾಖಲಾಗಿರುವ ಮೇಲ್ಮನವಿ ಪ್ರಕರಣಗಳನ್ನು ಉಪ ವಿಭಾಗಾಧಿಕಾರಿ ವೃಂದಕ್ಕೆ ಸಮಾನಾಂತರ ವೃಂದದ ಇತರ ಅಧಿಕಾರಿಗಳಿಗೆ ಕಾರ್ಯಹಂಚಿಕೆ ಮಾಡಿ ದಿನಾಂಕ:10.01.2024, 25.01.2024, 01.04.2024 ಮತ್ತು 10.09.2024ಗಳಂದು ಅಧಿಸೂಚನೆಗಳನ್ನು ಹೊರಡಿಸಲಾಗಿರುತ್ತದೆ.<br><br>ಕಂದಾಯ ನ್ಯಾಯಾಲಯ ಪ್ರಕರಣಗಳ ವಿವರಗಳನ್ನು ಆರ್.ಸಿ.ಸಿ.ಎಂ.ಎಸ್. ತಂತ್ರಾಂಶದ ಮೂಲಕ ನಿರ್ವಹಿಸಲಾಗುತ್ತಿದೆ.<br><br>ಪ್ರತಿ ತಿಂಗಳು ಮಾನ್ಯ ಕಂದಾಯ ಸಚಿವರ ಅಧ್ಯಕ್ಷತೆಯಲ್ಲಿ ನಡೆಯುವ ಪ್ರಗತಿ ಪರಿಶೀಲನಾ ಸಭೆಯಲ್ಲಿ ನ್ಯಾಯಾಲಯ ಪ್ರಕರಣಗಳ ವಿಲೇವಾರಿ ಕುರಿತು ಪರಿಶೀಲನೆ ನಡೆಸಿ, |

| | | |
|---|---|---|
| | | ಶೀಘ್ರವಾಗಿ ವಿಲೇವಾರಿ ಮಾಡಲು ಸೂಕ್ತ ನಿರ್ದೇಶನಗಳನ್ನು ನೀಡಲಾಗುತ್ತಿದೆ. |
| (ಇ) | ಕಾಲಮಿತಿಯೊಳಗೆ ವ್ಯಾಜ್ಯವನ್ನು ಇತ್ಯರ್ಥಪಡಿಸದ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ಮೈಸೂರು ವಿಭಾಗದಲ್ಲಿ 6 ತಿಂಗಳ ಮೇಲ್ಪಟ್ಟು ಪ್ರಕರಣಗಳನ್ನು ಬಾಕಿ ಉಳಿಸಿಕೊಂಡಿರುವ ಉಪ ವಿಭಾಗಾಧಿಕಾರಿ/ವಿಶೇಷ ಉಪ ವಿಭಾಗಾಧಿಕಾರಿಗಳಿಗೆ ಕಾರಣ ಕೇಳಿ ನೋಟಿಸ್ ಜಾರಿ ಮಾಡಲಾಗಿದೆ ಹಾಗೂ ಆದ್ಯತೆ ಮೇರೆಗೆ ವಾರದ 3 ಪೂರ್ಣ ದಿನಗಳು ಕಲಾಪಗಳನ್ನು ನಡೆಸಿ ಪ್ರಕರಣಗಳನ್ನು ಇತ್ಯರ್ಥಪಡಿಸಲು ನಿರ್ದೇಶನ ನೀಡಲಾಗಿದೆ.<br>ಬೆಳಗಾವಿ ವಿಭಾಗದಲ್ಲಿ ಒಂಬತ್ತು ಉಪ ವಿಭಾಗಾಧಿಕಾರಿಗಳಿಗೆ ಕಾರಣ ಕೇಳುವ ನೋಟೀಸ್ ಜಾರಿ ಮಾಡಿ, ಉತ್ತರಗಳನ್ನು ಪಡೆದು ಪರಿಶೀಲಿಸಿದ ನಂತರ ಸರ್ಕಾರದ ಮಾರ್ಗಸೂಚಿಗಳನ್ವಯ ಕಾಲಮಿತಿಯೊಳಗೆ ಪ್ರಕರಣಗಳನ್ನು ಇತ್ಯರ್ಥಪಡಿಸಲು ನಿರ್ದೇಶನ ನೀಡಲಾಗಿದೆ. |
| (ಈ) | ಬೆಂಗಳೂರು ನಗರ ಜಿಲ್ಲೆಯಲ್ಲಿ 16 ಸಾವಿರಕ್ಕೂ ಹೆಚ್ಚಾಗಿ ಭೂ ವ್ಯಾಜ್ಯ ಪ್ರಕರಣಗಳು ಬಾಕಿಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಹಾಗಿದ್ದಲ್ಲಿ ಶೀಘ್ರವಾಗಿ ಇತ್ಯರ್ಥಪಡಿಸಲು ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ ? | ಸರ್ಕಾರದ ಸುತ್ತೋಲೆ ಸಂಖ್ಯೆ:ಕಂಇ 17 ಟಿಆರ್‌ಎಂ 2021, ದಿನಾಂಕ:22.02.2021ರ ಹಾಗೂ ಸುತ್ತೋಲೆ ಸಂಖ್ಯೆ:ಕಂಇ 118 ಟಿಆರ್‌ಎಂ 2023 (ಭಾ-1), ದಿನಾಂಕ:26.08.2024ರಲ್ಲಿ ವಾರದ ಪ್ರತಿ ಮಂಗಳವಾರ, ಗುರುವಾರಗಳ ಜೊತೆಗೆ ಮತ್ತೊಂದು ಸೂಕ್ತ ದಿನವನ್ನು ಸೇರಿಸಿಕೊಂಡು ಒಟ್ಟು 3 ದಿನಗಳು ಕಡ್ಡಾಯವಾಗಿ ಕಂದಾಯ ಅರೆ ನ್ಯಾಯಿಕ ಪ್ರಕರಣಗಳ ವಿಚಾರಣೆ ನಡೆಸಿ, ಪ್ರಕರಣಗಳ ಶೀಘ್ರ ವಿಲೇವಾರಿ ಮಾಡಲು ಹಲವು ಕಟ್ಟುನಿಟ್ಟಿನ ನಿರ್ದೇಶನಗಳನ್ನು ನೀಡಲಾಗಿದೆ.<br>ಮುಂದುವರೆದು, ಹೆಚ್ಚು ಪ್ರಕರಣಗಳು ಬಾಕಿ ಇರುವ ಉಪ ವಿಭಾಗಾಧಿಕಾರಿಗಳ ನ್ಯಾಯಾಲಯಗಳಲ್ಲಿ ದಾಖಲಾಗಿರುವ ಮೇಲ್ಮನವಿ ಪ್ರಕರಣಗಳನ್ನು ಉಪ ವಿಭಾಗಾಧಿಕಾರಿ ವೃಂದಕ್ಕೆ ಸಮಾನಾಂತರ ವೃಂದದ ಇತರ ಅಧಿಕಾರಿಗಳಿಗೆ ಕಾರ್ಯಹಂಚಿಕೆ ಮಾಡಿ ದಿನಾಂಕ:10.01.2024, 25.01.2024, 01.04.2024 ಮತ್ತು 10.09.2024ಗಳಂದು ಅಧಿಸೂಚನೆಗಳನ್ನು ಹೊರಡಿಸಲಾಗಿರುತ್ತದೆ. |

**ಸಂ:ಕಂಇ 238 ಟಿಆರ್‌ಎಂ 2024** (1601235)

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು